ಪರಿವರ್ತನೆ.

556(615)

ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯಾತ್ ಖಾನ್ (ಹುಬ್ಬಳ್ಳಿ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಹುಬ್ಬಳ್ಳಿ ಧಾರವಾಡ ಮಹಾನಗರ ಮಧ್ಯದಲ್ಲಿರುವ ರಸ್ತೆ ಸೂಪರ್‌ಫಾಸ್ಟ್ ರಸ್ತೆಯಾಗಿ ಪರಿವರ್ತಿಸುವ ವಿಚಾರ ಸರ್ಕಾರದ ಗಮನದಲ್ಲಿದೆಯೇ?

ಆ. ಇದ್ದಲ್ಲಿ, ಸದರಿ ಕೆಲಸ ಯಾವ ವರ್ಷ ಪ್ರಾರಂಭಿಸಲಾಗುವುದು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು):

ಅ. ಸದ್ಯಕ್ಕೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಆ. ಪ್ರಾರಂಭಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಲೋಕೋಪಯೋಗಿ ಇಲಾಖೆಯಲ್ಲಿ ಖಾಲಿಯಿರುವ ಅಧಿಕಾರಿ ಹುದ್ದೆಗಳು.

558(೯೦೩)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

೧) ಲೋಕೋಪಯೋಗಿ ಇಲಾಖೆಯಲ್ಲಿ ಪ್ರಮುಖ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಖಾಲಿ ಇರುವ ಹುದ್ದೆಗಳ ವಿವರ ನೀಡುವುದು.

೨) ಸಿಬ್ಬಂದಿ ಇಲ್ಲದೇ ಲೋಕೋಪಯೋಗಿ ಇಲಾಖೆಯ ಅನೇಕ ಕಾಮಗಾರಿಗಳು ಕುಂಠಿತಗೊಂಡಿರುವುದು ನಿಜವೇ?

೩) ಖಾಲಿ ಇರುವ ಹುದ್ದೆಗಳಲ್ಲಿ ಎಷ್ಟು ಜನ ಅಧಿಕಾರಿಗಳನ್ನು ತಾತ್ಕಾಲಿಕವಾಗಿ ನಿಯೋಜನೆ ಮೇರೆಗೆ ತೆಗೆದುಕೊಳ್ಳಲಾಗಿದೆ.

೪) ನಿಯೋಜನೆ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಯಾವುದೇ

ಪ್ರಮುಖ ನಿರ್ಧಾರಗಳನ್ನು ತೆಗೆದುಕೊಳ್ಳದೇ ಇಲಾಖೆಯ ಕೆಲಸಕಾರ್ಯ ವಿಳಂಬವಾಗುತ್ತಿರುವುದು ನಿಜವೇ?

ಈ) ಹಾಗಿದ್ದಲ್ಲಿ, ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು):

೧) ಹೌದು.

ಲೋಕೊಪಯೋಗಿ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳು:

೧) ಮುಖ್ಯ ಇಂಜಿನಿಯರ್ -೦೩

೨) ಕಾರ್ಯಪಾಲಕ ಇಂಜಿನಿಯರ್ -೦೩

೩) ಸಹಾಯಕ ಕಾರ್ಯಪಾಲಕ ಇಂಜಿನಿಯರ್ -೦೩

೨) ಇಲ್ಲ.

೩) ನಿಯೋಜನೆ ಮೇಲೆ ಯಾರನ್ನೂ ತೆಗೆದುಕೊಂಡಿರುವುದಿಲ್ಲ. ಖಾಲಿ ಹುದ್ದೆಗಳಿಗೆ ಪ್ರಭಾರ ವ್ಯವಸ್ಥೆ ಮಾಡಲಾಗಿದೆ.

೪) ನಿಯೋಜನೆ ಮೇರೆಗೆ ಯಾವುದೇ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿಲ್ಲದ ಕಾರಣ ಈ ಪ್ರಶ್ನೆ ಉದ್ಭವಿಸುವುದಿಲ್ಲ.

೫) ಖಾಲಿ ಹುದ್ದೆಗಳನ್ನು ಪದೋನ್ನತಿಯ ಮೇಲೆ ತುಂಬಲು ಪರಿಶೀಲಿಸಲಾಗುತ್ತಿದೆ.

ಮದ್ದೂರಿನ ಒಳಿ ಶಿಂಷಾ ನದಿಗೆ ಅಡ್ಡಲಾಗಿ ಕಟ್ಟಿರುವ ಸೇತುವೆ.

559(904)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ-ಗ್ರಾಮೀಣ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮದ್ದೂರಿನ ಬಳಿ ಶಿಂಷಾ ನದಿಗೆ ಕಟ್ಟಿರುವ ಸೇತುವೆಯ ನಿರ್ಮಾಣದ ವೆಚ್ಚ ಎಷ್ಟು? ಈ ನಿರ್ಮಾಣದ ಗುತ್ತಿಗೆಯನ್ನು ಯಾರಿಗೆ ನೀಡಲಾಗಿತ್ತು ಮತ್ತು ಇದರ